ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	565
ಸದಸ್ಯರ ಹೆಸರು	:	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	05-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಬಾಲ್ಯವಿವಾಹ ಪದ್ಧತಿ ನಿಯಮ ಬಾಹಿರವಾಗಿದ್ದರೂ ಸಹ ಇತ್ತೀಚೆಗೆ ಹಲವಾರು ಪ್ರಕರಣಗಳು ಬೆಳಕಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ.
ಆ	ಬಾಲ್ಯವಿವಾಹಗಳಿಗೆ ತುತ್ತಾಗಿ ಎಷ್ಟು ಬಾಲಕಿಯರು ವಿಧವೆಯರಾಗಿದ್ದಾರೆ;	ಬಾಲ್ಯವಿವಾಹಕ್ಕೆ ತುತ್ತಾಗಿ ಯಾವುದೇ ಬಾಲಕಿಯು ವಿಧವೆಯರಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
ಇ	ಅವರುಗಳು ಮರು ಮದುವೆ ಆಗಲು ಮುಂದೆ ಬಂದಲ್ಲಿ ಸರ್ಕಾರ ಅವರಿಗೆ ಹೇಗೆ ರಕ್ಷಣೆಯನ್ನು ಕೊಡುತ್ತದೆ;	ಅನ್ವಯಿಸುವುದಿಲ್ಲ.
ಈ	ಎಷ್ಟು ಬಾಲ್ಯ ವಿವಾಹ ಪ್ರಕರಣಗಳನ್ನು ನ್ಯಾಯಾಲಯದಿಂದ ತಡೆಯಾಜ್ಞೆ ಪಡೆದು ನಿಲ್ಲಿಸಲಾಗಿದೆ;	ಬಾಲ್ಯ ವಿವಾಹ ಪ್ರಕರಣಗಳನ್ನು ನ್ಯಾಯಾಲಯದಿಂದ ತಡೆಯಾಜ್ಞೆ ಪಡೆದು ನಿಲ್ಲಿಸಲಾಗಿರುವ ಯಾವುದೇ ಪ್ರಕರಣಗಳು ಇರುವುದಿಲ್ಲ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 16 ಮಮಅ 2021